# ಕರ್ನಾಟಕ ವಿಧಾನ ಪರಿಷತ್ತು

<table>
<tr><td colspan="2">ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:</td><td>807</td></tr>
<tr><td colspan="2">ಮಾನ್ಯ ಸದಸ್ಯರ ಹೆಸರು</td><td>ಡಾ: ಬಿ. ಜಿ ಪಾಟೀಲ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)</td></tr>
<tr><td colspan="2">ಉತ್ತರಿಸುವ ಸಚಿವರು</td><td>ಉನ್ನತ ಶಿಕ್ಷಣ ಸಚಿವರು</td></tr>
<tr><td colspan="2">ಉತ್ತರಿಸಬೇಕಾದ ದಿನಾಂಕ</td><td>16.12.2024</td></tr>
<tr><th colspan="2">ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ರಾಜ್ಯದಲ್ಲಿ ಜಿಲ್ಲೆಗೊಂದು ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರ ಸುತ್ತೋಲೆ ಹೊರಡಿಸಿದೆಯೇ; (ಆದೇಶದ ಪ್ರತಿ ನೀಡುವುದು)</td><td>ಸರ್ಕಾರದಿಂದ ಯಾವುದೇ ಸುತ್ತೋಲೆಗಳನ್ನು ಹೊರಡಿಸಿರುವುದಿಲ್ಲ.</td></tr>
<tr><td>(ಆ)</td><td>ಹೈದ್ರಾಬಾದ್ ಕರ್ನಾಟಕ ವ್ಯಾಪ್ತಿಯಲ್ಲಿ ಬರುವ ಬೀದರ್, ರಾಯಚೂರು, ವಿಶ್ವವಿದ್ಯಾಲಯಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯನ್ನು ನಿವಾರಿಸಲು ಸರ್ಕಾರ ಯಾವ ಕ್ರಮಕೈಗೊಂಡಿದೆ;</td><td>2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ, ತಂತ್ರಜ್ಞಾನದ ಗರಿಷ್ಠ ಬಳಕೆಯೊಂದಿಗೆ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೇ, ಹೊಸ ಹುದ್ದೆಗಳನ್ನು ಸೃಜಿಸದೇ, ಜಮೀನು/ವಾಹನ ಖರೀದಿಸದೇ, ಹೊಸ ಕಟ್ಟಡಗಳನ್ನು ನಿರ್ಮಿಸದೇ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿ ಚಾಮರಾಜನಗರ, ಬೀದರ್, ಹಾವೇರಿ, ಹಾಸನ, ಕೊಡಗು, ಕೊಪ್ಪಳ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿರುವ ಸ್ನಾತಕೋತ್ತರ ಕೇಂದ್ರಗಳನ್ನು 07 ನೂತನ ವಿಶ್ವವಿದ್ಯಾಲಯಗಳನ್ನಾಗಿ ಸ್ಥಾಪಿಸಿ, ಪ್ರಾರಂಭಿಸಲಾಗಿದೆ.<br><br>ಅದರಂತೆ, ಬೀದರ್ ವಿಶ್ವವಿದ್ಯಾಲಯಕ್ಕೆ ಮೂಲಭೂತ ಸೌಲಭ್ಯಕ್ಕಾಗಿ ಯಾವುದೇ ಅನುದಾನ ಬಿಡುಗಡೆಗೊಳಿಸಿರುವುದಿಲ್ಲ.<br><br>ರಾಯಚೂರು ವಿಶ್ವವಿದ್ಯಾಲಯಕ್ಕೆ 2021-22ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿ ಬಿಡುಗಡೆ ಮಾಡಿದ ರೂ.15.00 ಕೋಟಿಗಳಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆಯನ್ನು ಅನುಷ್ಠಾನಗೊಳಿಸಲು ರಾಯಚೂರು ವಿಶ್ವವಿದ್ಯಾಲಯದ ಮೊದಲ ಹಂತದ ಕಟ್ಟಡ ಕಾಮಗಾರಿಗಳು, ಪ್ರಯೋಗಾಲಯ ಉಪಕರಣಗಳು, ಮಾಡ್ಯುಲರ್ ವಿಜ್ಞಾನ ಪ್ರಯೋಗಾಲಯ ಸಿದ್ಧಗೊಳಿಸಲು, ಆಂತರಿಕ ಸಿವಿಲ್ ಕಾಮಗಾರಿಗಳು ಮತ್ತು ಪೀಠೋಪಕರಣ ಖರೀದಿಸುವ ರೂ.15.00 ಕೋಟಿಗಳ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಿದೆ.</td></tr>
<tr><td>(ಇ)</td><td>ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಭೋದಕರ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಭೋದಕ ಹುದ್ದೆಗಳ ನೇಮಕಾತಿ ಮಾಡಲು ಸರ್ಕಾರ ಯಾವ ಕ್ರಮಕೈಗೊಂಡಿದೆ?</td><td>ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ವಿವರ ಈ ಕೆಳಕಂಡಂತಿದೆ.<br>
<table>
<tr><th>ಕ್ರ.ಸಂ.</th><th>ಹುದ್ದೆಯ ಹೆಸರು</th><th>ಖಾಲಿಯಿರುವ ಹುದ್ದೆಗಳು</th></tr>
<tr><td>1</td><td>ಪ್ರಾಧ್ಯಾಪಕರು</td><td>24</td></tr>
<tr><td>2</td><td>ಸಹ ಪ್ರಾಧ್ಯಾಪಕರು</td><td>51</td></tr>
<tr><td>3</td><td>ಸಹಾಯಕ ಪ್ರಾಧ್ಯಾಪಕರು</td><td>95</td></tr>
<tr><td colspan="2">ಒಟ್ಟು</td><td>170</td></tr>
</table>
<br>ಈ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.</td></tr>
</table>

ಸಂಖ್ಯೆ: ಇಡಿ 171 ಯುಜಿವಿ 2024

(ಡಾ. ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು